ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

6

ಇಲಾಖೆ / ವಿಷಯ : DEPARTMENT / SUBJECT: ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 21/4/21

ಕೋವಿಡ್ ಬಗ್ಗೆ ಜಾಗೃತಿ ಮೂಡಿಸಿ: ಸ್ಪೀಕರ್ ಕರೆ

ಕೋವಿಡ್-19ರಂತಹ ಸಾಂಕ್ರಾಮಿಕ ರೋಗಗಳು ಹರಡದಂತೆ ಮತ್ತು ರೋಗ ನಿರ್ಮೂಲನೆಗೆ

ಎಲ್ಲ ಕಾಲೇಜು ವರ್ಗಗಳು, ಸಂಘ-ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳ ಸಹಾಯವನ್ನು ಪಡೆದು ಜನಜಾಗೃತಿ ಮೂಡಿಸುವಂತಹ ಕ್ರಮ ಕೈಗೊಳ್ಳಬೇಕು. ಕೋವಿಡ್ ಅಥವಾ ಯಾವುದೇ ಕಾಯಿಲೆಗಳಿಗೆ ಸಂಬಂಧಿಸಿದಂತೆ ಅಲೋಪತಿ ಮತ್ತು ಆಯುಷ್ ವೈದ್ಯ ಪದ್ಧತಿಯನ್ನು ಸಮಾನವಾಗಿ ಪರಿಗಣಿಸಿ. ಅವುಗಳಿಂದಾಗುವ ಪ್ರಯೋಜನಗಳನ್ನು ಎಲ್ಲರೂ ಪಡೆದುಕೊಳ್ಳಬೇಕು. ಅವುಗಳಲ್ಲಿನ ರೋಗ ನಿರೋಧಕ ಶಕ್ತಿ ಅಥವಾ ಕಾಯಿಲೆಗಳನ್ನು ಗುಣಪಡಿಸುವಂತಹ ಸಂಗತಿಗಳ ಕುರಿತು ಜನಸಾಮಾನ್ಯರಿಗೆ ಅರಿವು ಮೂಡಿಸುವುದು ಜನಪ್ರತಿನಿಧಿಗಳ ಮತ್ತು ಸರ್ಕಾರದ ಕರ್ತವ್ಯವಾಗಿದೆ. ರೋಗ ಲಕ್ಷಣ ಕಂಡುಬಂದವರಿಗೆ ಚಿಕಿತ್ಸೆ ಪಡೆಯುವಂತೆ ಉತ್ತೇಜಿಸಬೇಕು. ಈ ದಿಸೆಯಲ್ಲಿ ಎಲ್ಲರೂ ಜಾಗೃತರಾಗಬೇಕು. ಸರ್ಕಾರದ ಸೌಲಭ್ಯಗಳು ಫಲಾನುಭವಿಗಳಿಗೆ ಸಿಗುವಂತಹ ಬದ್ಧತೆಯನ್ನು ಸಂಬಂಧಪಟ್ಟವರು ಹೊಂದಿರುವುದು ಅತಿ ಮುಖ್ಯ.

• ವಿಶ್ವೇಶ್ವರ ಹೆಗಡೆ ಕಾಗೇರಿ, ವಿಧಾನಸಭೆ ಸ್ಪೀಕರ್